ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ದಿನಾಂಕ:07-05-2022ರಂದು ಸಿ.ವಿ.ರಾಮನ್‌ನಗರ ಉಪ ವಿಭಾಗ,
ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ ವಾರ್ಡ್ ಸಮಿತಿ ಸಭೆಯ ನಡಾವಳಿಗಳು

ದಿನಾಂಕ:07-05-2022ರಂದು ಬೆಳಗ್ಗೆ 11.30.00 ಗಂಟೆಗೆ ವಾರ್ಡ್-50 ಬೆನ್ನಿಗಾನಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಶ್ರೀ.ರಾಮಾಂಜನೇಯ, ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ) ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ ವಾರ್ಡ್ ಕಛೇರಿ, 2ನೇ ಮುಖ್ಯರಸ್ತೆ, ಕಸ್ತೂರಿನಗರ ಬೆಂಗಳೂರು-560043 ಇಲ್ಲಿ ಹಮ್ಮಿಕೊಳ್ಳಲಾಯಿತು. ಸದರಿ ಸಭೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಮಿತಿ ಸದಸ್ಯರು ಹಾಗೂ ಆರ್.ಡಬ್ಲ್ಯೂ.ಎ

1. ಶ್ರೀ.ವೇಣುಗೋಪಾಲ್ ರೈ ಆರ್.ಡಬ್ಲ್ಯೂ.ಎ
2. ಶ್ರೀ.ನಾಗರಾಜ್ ಸದಸ್ಯರು
3. ಶ್ರೀ.ಎನ್.ನಾಗೇಂದ್ರ ಸದಸ್ಯರು
4. ಶ್ರೀ.ವಿ.ಎಂ.ರಾಜಣ್ಣ ಸದಸ್ಯರು
5. ಶ್ರೀ.ರಮಾನಥ್ ರಾವ್ ಆರ್.ಡಬ್ಲ್ಯೂ.ಎ
6. ಶ್ರೀ.ರಮೇಶ್ ಸದಸ್ಯರು

ಸಭೆಯಲ್ಲಿ ಹಾಜರಿದ್ದ ವಾರ್ಡ್ ಮಟ್ಟದ ಅಧಿಕಾರಿ/ನೌಕರರು

1. ಶ್ರೀ.ರಾಮಾಂಜನೇಯ, ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ) ಹಾಗೂ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ
2. ಶ್ರೀ.ನರಸಿಂಹಯ್ಯ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ ವಾರ್ಡ್ ಸಂಖ್ಯೆ:50, ಬೆನ್ನಿಗಾನಹಳ್ಳಿ
3. ಶ್ರೀ.ಸಂತೋಷ್ ಕೆಲಸ ಪರಿವೀಕ್ಷಕರು ಬೆಸ್ಕಾಂ
4. ಶ್ರೀಮತಿ.ಎಸ್.ತಿಲಗ ಕಿರಿಯ ಅಭಿಯಂತರರು, ಬೆಸ್ಕಾಂ
5. ಶ್ರೀ.ಲೋಹತ್.ಕೆ.ಪ್ರಕಾಶ್, ಕಿರಿಯ ಅಭಿಯಂತರರು, ಬೆಂಗಳೂರು ಜಲ ಮಂಡಳಿ,
6. ಶ್ರೀ.ಪ್ರಭುದಾಸ್, ಕಿರಿಯ ಆರೋಗ್ಯ ಪರಿವೀಕ್ಷಕರು
7. ಶ್ರೀ.ಹರಿಕೃಷ್ಣ.ಎಸ್.ಕೆ ವಾರ್ಡ್ ಮಾರ್ಷಲ್
8. ಶ್ರೀ.ಕುಮಾರ್, ಕಂದಾಯ ವಸೂಲಿಗಾರರು, ವಾರ್ಡ್ ಸಂಖ್ಯೆ:50

ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರಿಗೆ, ಸದಸ್ಯರಿಗೆ ಹಾಗೂ ವಿವಿಧ ಇಲಾಖೆಯ ಅಧಿಕಾರಿ/ನೌಕರರುಗಳಿಗೆ ಹಾಗೂ ಸಾರ್ವಜನಿಕರಿಗೆ ಸ್ವಾಗತ ಕೋರಿದರು. ಹಾಗೂ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿರುವ ವಿಷಯಗಳ ಬಗ್ಗೆ ಹಾಗೂ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಸಭೆಯಲ್ಲಿ ಮಂಡಿಸಲು ಮಾನ್ಯ ಅಧ್ಯಕ್ಷರು ತಿಳಿಸಿ, ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯಲ್ಲಿ ಚರ್ಚಿಸಿದ ವಿಷಯಗಳು:-

| ಕ್ರ. ಸಂ | ಮಾಹಿತಿ | ಕ್ರಮ ವಹಿಸಬೇಕಾಗಿರುವ ಅಧಿಕಾರಿ |
|---|---|---|
| | ಘನತ್ಯಾಜ್ಯ ನಿರ್ವಹಣೆ (SWM) | |
| 1 | 3ನೇ ಅಡ್ಡರಸ್ತೆ ಕಸ್ತೂರಿನಗರದಲ್ಲಿ ಕಸ ಸಂಗ್ರಹಣೆ ಸ್ಥಳಕ್ಕೆ ಕಾಂಕ್ರೀಟ್ ಹಾಕಲು ಕೋರಲಾಯಿತು. | Junior/Senior Health Inspector |
| | ಕಾಮಗಾರಿ ಇಲಾಖೆ (Engineering) | |
| 1 | • ಕಸ್ತೂರಿನಗರದ 2ನೇ ಮುಖ್ಯರಸ್ತೆಯಲ್ಲಿ ಬೀದಿ ಬದಿ ವ್ಯಾಪಾರಿಗಳಿಂದ ಪಾದಚಾರಿ ಮಾರ್ಗವನ್ನು ಒತ್ತುವರಿ ತೆರವು ಕಾರ್ಯಾಚರಣೆಯ ಬಗ್ಗೆ. | Assistant Engineer-BBMP |

| | | |
|---|---|---|
| | **ಬೆಂಗಳೂರು ಜಲ ಮಂಡಳಿ (BWSSB)** | |
| 1 | ಕಸ್ತೂರಿನಗರದ ಸರ್ವೀಸ್ ರಸ್ತೆಯಲ್ಲಿ ಮ್ಯಾನ್‌ಹೋಲ್‌ಗಳು ಹಾಳಾಗಿ, ರಸ್ತೆಯಲ್ಲೇ ಒಳಚರಂಡಿ ನೀರು ಹರಿಯುತ್ತಿದ್ದು, ಇದನ್ನು ಸರಿಪಡಿಸಲು ಕೋರಲಾಯಿತು. | Assistant Engineer-BWSSB |
| 2 | ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ್ನು ಸಮರ್ಪಕವಾಗಿ ಸರಬರಾಜು ಮಾಡಲು ಸಂಬಂಧಪಟ್ಟ ಅಭಿಯಂತರರು ಕ್ರಮ ಕೈಗೊಳ್ಳಲು ಕೋರಿದರು. | |
| | **ಬೀದಿ ದೀಪಗಳು (STREET LIGHTS)** | |
| 1 | ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಸಭೆಯಲ್ಲಿ ದೂರು ನೀಡಲಾಯಿತು. ಇದಕ್ಕೆ ಗುತ್ತಿಗೆದಾರರ ಪರವಾಗಿ ಶ್ರೀ.ಸಂತೋಷ್‌ರವರು ದುರಸ್ಥಿಯಲ್ಲಿರುವ ಬೀದಿ ದೀಪಗಳನ್ನು ಸರಿಪಡಿಸಲಾಗುವುದ ಎಂದು ತಿಳಿಸಿದರು. | ಸಹಾಯಕ ಅಭಿಯಂತರರು ಬೆಸ್ಕಾಂ |

ಪ್ರಸ್ತುತ ಸಭೆಗೆ ಗೂರು ಹಾಜರಾಗಿರುವವರ ವಿರುದ್ಧ ನೋಟೀಸು ಜಾರಿ ಮಾಡಿ, ಮುಂದಿನ ಸಭೆಗೆ ಕಡ್ಡಾಯವಾಗಿ ನಿಗಧಿತ ಸಮಯದೊಳಗೆ ಹಾಜರಿರಲು ಹಾಗೂ ಮುಂದಿನ ಸಭೆಯ ಒಳಗಾಗಿ ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ವಹಿಸಿ, ವಾರ್ಡ್ ಸಮಿತಿ ಕಾರ್ಯದರ್ಶಿರವರಿಗೆ ಅನುಪಾಲನಾ ವರದಿಯನ್ನು ಸಲ್ಲಿಸಲು ತಿಳಿಸಿ ಕಾರ್ಯದರ್ಶಿಗಳು ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು

ಶ್ರೀ.ನರಸಿಂಹಯ್ಯ.ಎಸ್
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ:50 ಬೆನ್ನಿಗಾನಹಳ್ಳಿ

ಅಧ್ಯಕ್ಷರು

ಶ್ರೀ.ರಾಮಾಂಜನೇಯ.
ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ)
ಮತ್ತು ನೋಡೆಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ:50 ಬೆನ್ನಿಗಾನಹಳ್ಳಿ

ಪ್ರತಿಯನ್ನು:-

1. ಶ್ರೀ.ರಾಮಾಂಜನೇಯ, ಕಾರ್ಯಪಾಲಕ ಅಭಿಯಂತರರು (ವಿದ್ಯುತ್-ದಕ್ಷಿಣ)ಹಾಗೂ ನೋಡೆಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ:50 ರವರ ಮಾಹಿತಿಗಾಗಿ ಕಳುಹಿಸಿದೆ.
2. ಕಾರ್ಯಪಾಲಕ ಅಭಿಯಂತರರು, ಸಿ.ವಿ.ರಾಮನ್‌ನಗರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
3. ಮಾನ್ಯ ತಹಶೀಲ್ದಾರ್, ಕೆ.ಆರ್.ಪುರಂ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸುತ್ತಾ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
4. ಅಧೀಕ್ಷಕರು, ತೋಟಗಾರಿಕೆ ಇಲಾಖೆ(ಪೂರ್ವ) ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
5. ಆರೋಗ್ಯ ವೈಧ್ಯಾಧಿಕಾರಿಗಳು(ಸಿ.ವಿ.ರಾಮನ್ ನಗರ) ವಿಭಾಗ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
6. ಆರಕ್ಷಕ ನಿರೀಕ್ಷಕರು, ಕಾನೂನು ಸುವ್ಯವಸ್ಥೆ, ಬೈಯ್ಯಪ್ಪನಹಳ್ಳಿ/ರಾಮೂರ್ತಿನಗರ/ಜೀವನ್‌ಭಿಮಾನಗರ/ಇಂದಿರಾನಗರ, ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
7. ಆರಕ್ಷಕ ನಿರೀಕ್ಷಕರು(ಸಂಚಾರ ಪೋಲೀಸ್ ಠಾಣೆ) ಬಾಣಸವಾಡಿ/ರಾಮೂರ್ತಿನಗರ/ಜೀವನ್‌ಭಿಮಾನಗರ/ಇಂದಿರಾನಗರ, ಪೋಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಿ.ವಿ.ರಾಮನ್‌ನಗರ ಉಪ ವಿಭಾಗ/ಕಾಮಗಾರಿ ಇಲಾಖೆ/ಘನತ್ಯಾಜ್ಯ ನಿರ್ವಹಣೆ/ವಿದ್ಯುತ್/ಬಿಡಬ್ಲ್ಯೂಎಸ್‌ಎಸ್‌ಬಿ/ಬೆಸ್ಕಾಂ/ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಹಾಗೂ ಅನುಸರಣಾ ವರದಿಯನ್ನು ಸಲ್ಲಿಸಲು ಕಳುಹಿಸಿದೆ.